

57,000 ಅತಿಥಿ ಉಪನ್ಯಾಸಕ ಶಿಕ್ಷಕರ ನೇಮಕಾತಿ

ರಾಜ್ಯ ಸರ್ಕಾರವು ಪ್ರಾಥಮಿಕ, ಪ್ರೌಢ ಶಾಲೆ ಹಾಗೂ ಪಿಯು ಕಾಲೇಜುಗಳಲ್ಲಿ ಒಟ್ಟಾರೆಯಾಗಿ 57 ಸಾವಿರಕ್ಕೂ ಅಧಿಕ ಅತಿಥಿ ಶಿಕ್ಷಕರನ್ನು ನೇಮಿಸಲು ಅನುಮತಿ ನೀಡಿದೆ. 2026-27ನೇ ಸಾಲಿಗೆ ಖಾಲಿ ಇರುವ ಹುದ್ದೆಗಳಿಗೆ ಎದುರಾಗಿ ಶೈಕ್ಷಣಿಕ ಹಿತದೃಷ್ಟಿಯಿಂದ ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಅನುಮತಿಸಿ ಆದೇಶ ಹೊರಡಿಸಿದೆ.

40,000 ಪ್ರಾಥಮಿಕ ಶಾಲೆಗಳಿಗೆ ಭರ್ತಿ

11,000 ಪ್ರೌಢ ಶಾಲೆಗಳಿಗೆ ನೇಮಕ

ರಾಜ್ಯದ ಪ್ರಾಥಮಿಕ, ಪ್ರೌಢ ಶಾಲೆಗಳು ಜೂ.1ಕ್ಕೆ ಆರಂಭವಾಗಲಿವೆ. ಪ್ರಾಥಮಿಕ ಶಾಲೆಗಳಿಗೆ ಒಟ್ಟಾರೆ 40 ಸಾವಿರ ಹಾಗೂ ಪ್ರೌಢ ಶಾಲೆಗಳಿಗೆ 11 ಸಾವಿರ ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳುವಂತೆ ಸೂಚಿಸಲಾಗಿದೆ.

ಶಾಲಾರಂಭದ ದಿನವೇ ಶಿಕ್ಷಕರು ಲಭ್ಯವಿರುವಂತೆ ನೋಡಿಕೊಳ್ಳಬೇಕಿದ್ದು, ಪೂರ್ವ ನಿಗದಿಯಂತೆ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸಲು ಅನುಕೂಲವಾಗುವಂತೆ ನೇಮಕಾತಿಗೆ ಅವಕಾಶ ನೀಡಲಾಗಿದೆ ಎಂದು ಇಲಾಖೆ ತಿಳಿಸಿದೆ.

ಕಾಯಂ ಶಿಕ್ಷಕರ ನೇಮಕಾತಿ ಆಗುವವರೆಗೆ ಅಥವಾ ಶೈಕ್ಷಣಿಕ ವರ್ಷ ಅಂತ್ಯದವರೆಗೆ ಅತಿಥಿ ಶಿಕ್ಷಕರ ನೇಮಕಾತಿ ಮುಂದುವರಿಯಲಿದೆ. ತಾತ್ಕಾಲಿಕ ನೆಲೆಯಲ್ಲಿ ಇವರನ್ನು ಭರ್ತಿ ಮಾಡಿಕೊಳ್ಳತಕ್ಕದ್ದು ಎಂದು ಸುತ್ತೋಲೆಯಲ್ಲಿ ನಿರ್ದೇಶಿಸಲಾಗಿದೆ.

ಈ ಶಿಕ್ಷಕರ ನೇಮಕಾತಿಗೆ ಅಗತ್ಯವಿರುವ ಗೌರವ ಧನ ಪಾವತಿಗಾಗಿ ಅವಶ್ಯವಿರುವ ಅನುದಾನದ ವಿವರ ಹಾಗೂ ಶಿಕ್ಷಕರ ಜಿಲ್ಲಾವಾರು/ತಾಲೂಕುವಾರು ವಿವರಗಳನ್ನು ಸಲ್ಲಿಸುವಂತೆ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಅಧೀನ ಕಾರ್ಯದರ್ಶಿ ಎಸ್. ಪ್ರಕಾಶ್ ಸುತ್ತೋಲೆಯಲ್ಲಿ ತಿಳಿಸಿದ್ದಾರೆ.

14,000 ರೂ. ವೇತನ

ಅತಿಥಿ ಉಪನ್ಯಾಸಕರಿಗೆ ಮಾಸಿಕ 14 ಸಾವಿರ ರೂ. ಗೌರವಧನ ನೀಡಲು ಸೂಚಿಸಿದೆ. ಪ್ರತಿ ವಾರ 10-12 ತಾಸು ಕಾರ್ಯಭಾರ ಅವಧಿಯನ್ನು ನಿರ್ವಹಿಸಲು ಅನುಮತಿ ನೀಡಬಹುದು ಎಂದು ತಿಳಿಸಲಾಗಿದೆ. ಇದ್ದಕಿಂತ ಹೆಚ್ಚಿನ ಕಾರ್ಯಭಾರವಿದ್ದರೆ ಇಬ್ಬರನ್ನು ನೇಮಕ ಮಾಡಿಕೊಳ್ಳಬಹುದು. ಹೆಚ್ಚಿನ ಅಭ್ಯರ್ಥಿಗಳು ಬಂದಲ್ಲಿ ಅಧಿಕ ಅಂಕ ಗಳಿಸಿದವರನ್ನು ಅಥವಾ ಸೇವಾ ಹಿರಿತನವನ್ನು ಪರಿಗಣಿಸುವಂತೆ ಸೂಚಿಸಲಾಗಿದೆ.

ಪಿಯು ಕಾಲೇಜುಗಳಲ್ಲಿ ಅವಕಾಶ

ಇನ್ನೊಂದೆಡೆ, ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ 6,086 ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಮುಂದಾಗಿದೆ. ಶಿಕ್ಷಣ ಇಲಾಖೆಯ (ಪದವಿ ಪೂರ್ವ) ನಿರ್ದೇಶನಾಲಯವು ಈ ಬಾರಿ 100 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಗಣಕ ವಿಜ್ಞಾನ ವಿಷಯ ಆರಂಭಿಸಲು, 60 ಸರ್ಕಾರಿ ಪಿಯು ಕಾಲೇಜುಗಳನ್ನು ಆದರ್ಶ ಕಾಲೇಜುಗಳಾಗಿ ಉನ್ನತೀಕರಣ, ಬಡ್ತಿ ಹಾಗೂ ನಿವೃತ್ತಿ ಹಿನ್ನೆಲೆಯಲ್ಲಿ ಖಾಲಿಯಾಗುವ ಉಪನ್ಯಾಸಕ ಹುದ್ದೆಗಳಿಗೆ ಪ್ರತಿಯಾಗಿ 6,687 ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಅನುಮತಿ ಕೋರಿತ್ತು. ಅವರ ಗೌರವಧನಕ್ಕಾಗಿ 93.61 ಕೋಟಿ ರೂ. ಅನುದಾನ ಒದಗಿಸಲು ಪ್ರಸ್ತಾವನೆ ಸಲ್ಲಿಸಿತ್ತು. ಆದರೆ ಸರ್ಕಾರ, ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಕಳೆದ ಬಾರಿಯಷ್ಟೇ ಸಂಖ್ಯೆಯ ಅತಿಥಿ ಉಪನ್ಯಾಸಕರನ್ನು ಮಾತ್ರ ನೇಮಕ ಮಾಡಿಕೊಳ್ಳಲು 85.20 ಕೋಟಿ ರೂ. ಅನುದಾನ ಒದಗಿಸಿದೆ. ಹೀಗಾಗಿ 6,086 ಅತಿಥಿ ಉಪನ್ಯಾಸಕರನ್ನು 10 ತಿಂಗಳ ಅವಧಿಗೆ ನೇಮಕ ಮಾಡಿಕೊಳ್ಳಲು ಇಲಾಖೆ ಆದೇಶಿಸಿದೆ.

6,086 ಲಭ್ಯ ಸ್ಥಾನಗಳು

ಕಳೆದ 2025-26 ನೇ ಸಾಲಿನಲ್ಲಿ 4,689 ಹುದ್ದೆಗಳನ್ನು ಭರ್ತಿ ಮಾಡಲಾಗಿತ್ತು. ನಂತರದಲ್ಲಿ ಹೆಚ್ಚುವರಿಯಾಗಿ 819 ಹುದ್ದೆಗಳಿಗೆ ಅವಕಾಶ ನೀಡಲಾಗಿತ್ತು. ಕಾಲೇಜಿನಲ್ಲಿ ವಿದ್ಯಾರ್ಥಿಗಳ ಸಂಖ್ಯೆಯ ಆಧಾರದ ಮೇಲೆ ಉಪನ್ಯಾಸಕರನ್ನು ನೇಮಕ ಮಾಡಲಾಗುತ್ತದೆ. ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಡಿಮೆ ಕಾರ್ಯಭಾರ ಹೊಂದಿರುವ ವಿಷಯಗಳ ಉಪನ್ಯಾಸಕರನ್ನು ಜಿಲ್ಲೆಯ ಇತರ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ನಿಯೋಜಿಸಿ ನಂತರ ಉಳಿದ ಕಡೆಗಳಲ್ಲಿ ಮಾತ್ರ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲಾಗುತ್ತದೆ ಎಂದು ಇಲಾಖೆ ಹೇಳಿದೆ.